# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಹನುಮಂತರೆಡ್ಡಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕಾಳಗಿ ಹಾಗೂ ಶ್ರೀ ಸುಧೀರ್ ಕುಮಾರ್, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕಾಳಗಿ ಇವರುಗಳ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:-

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ GLB-527/2013/DRE-3 ದಿನಾಂಕ. 16.05.2017.

2) ಮಾನ್ಯ ಉಪ ಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ GLB-527/2013/DRE-3 ದಿನಾಂಕ. 11.05.2017.

-----

**ಪ್ರಸ್ತಾವನೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 16.05.2017ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-1ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಹನುಮಂತರಾಯ ಉಪ್ಪಿನ ತಂದೆ ಚೆನ್ನಪ್ಪ ಉಪ್ಪಿನ, ನಂ.1-100, ಸುಗೂರು (ಕೆ) ಗ್ರಾಮ, ಚಿತ್ತಾಪೂರ ತಾಲ್ಲೂಕು, ಕಲಬುರಗಿ ಜಿಲ್ಲೆ ಇವರು ಚಿತ್ತಾಪೂರ ತಾಲ್ಲೂಕಿನ ಸುಗೂರ್ ಗ್ರಾಮದಿಂದ ವೆಂಕಟೇಶ್ವರ ದೇವಸ್ಥಾನದ ವರೆಗೆ ಸಿ.ಸಿ. ರಸ್ತೆ ನಿರ್ಮಾಣ ಕಾಮಗಾರಿಯನ್ನು ಕಳಪೆಯಾಗಿ ನಿರ್ವಹಿಸಿ ಈ ಕೆಳಕಂಡವರು ಹಣ ದುರುಪಯೋಗಪಡಿಸಿಕೊಂಡಿರುತ್ತಾರೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ:-

1. ಶ್ರೀ ಹನುಮಂತರೆಡ್ಡಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕಾಳಗಿ, ಚಿತ್ತಾಪೂರ ತಾಲ್ಲೂಕು.
2. ಶ್ರೀ ಸುಧೀರ್ ಕುಮಾರ್, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕಾಳಗಿ, ಚಿತ್ತಾಪೂರ ತಾಲ್ಲೂಕು.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತರಿಂದ ಆಕ್ಷೇಪಣೆಗಳನ್ನು ಕೇಳಲಾಗಿದ್ದು, ಶ್ರೀ ಹನುಮಂತರೆಡ್ಡಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸಲ್ಲಿಸಿರುವ ಆಕ್ಷೇಪಣೆಯಲ್ಲಿ ಪ್ರಶ್ನಿತ ಕಾಮಗಾರಿಯನ್ನು ಮಂಜೂರಾದ ಅಂದಾಜಿನಂತೆ ಕೈಗೊಳ್ಳಲಾಗಿದೆಯೆಂದು, ಕಾಮಗಾರಿಯ ತಪಾಸಣೆ ನಡೆಸಿದ ಅಧಿಕಾರಿಗಳು ಕಾಮಗಾರಿ ತೃಪ್ತಿಕರವಾಗಿದೆಯೆಂದು ತಿಳಿಸಿರುತ್ತಾರೆಂದು, ಸದರಿ ಕಾಮಗಾರಿಯ ಅಂದಾಜು ಮೊತ್ತ ರೂ. 1.75 ಲಕ್ಷಗಳಾಗಿದ್ದು ಹಾಗೂ ಈ ಕಾಮಗಾರಿಯನ್ನು ತುಂಡು ಗುತ್ತಿಗೆ ಆಧಾರದ ಮೇಲೆ ಗುತ್ತಿಗೆದಾರರಿಗೆ ವಹಿಸಲಾಗಿದೆಯೆಂದು ತಿಳಿಸಿ ಅವರ ವಿರುದ್ಧ ಮಾಡಿರುವ ಆರೋಪಗಳನ್ನು ಅಲ್ಲಗಳೆದಿರುತ್ತಾರೆಂದು, ಮತ್ತೊಬ್ಬ ಆಪಾದಿತರಾದ ಶ್ರೀ ಸುಧೀರ್ ಕುಮಾರ್, ಸಹಾಯಕ ಇಂಜಿನಿಯರ್ ಇವರು ಯಾವುದೇ ಆಕ್ಷೇಪಣೆಯನ್ನು ಸಲ್ಲಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ತನಿಖೆಯನ್ನು ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ಚಿತ್ತಾಪೂರ ತಾಲ್ಲೂಕಿನ ಸುಗೂರ್ ಗ್ರಾಮದಿಂದ ವೆಂಕಟೇಶ್ವರ ದೇವಸ್ಥಾನದ ವರೆಗೆ ಸಿ.ಸಿ. ರಸ್ತೆ ನಿರ್ಮಾಣ ಕಾಮಗಾರಿಯ ಮಂಜೂರಾದ ಅಂದಾಜು ಪಟ್ಟಿ / ಅಳತೆ ಪುಸ್ತಕದಲ್ಲಿ ದಾಖಲಾಧ ಅಳತೆ 10.00 + 7.5 = 17.50 ಸೆಂ.ಮಿ. ಆಗಿದ್ದು, ಆದರೆ ಸ್ಥಳ ಪರಿಶೀಲನೆಯಲ್ಲಿ ಕಂಡು ಬಂದ ಒಟ್ಟು ಅಳತೆ 16.50 ಆಗಿದ್ದು, ಒಟ್ಟಾರೆ 1.00 ಸೆಂ.ಮೀ.ನಷ್ಟು ಕಾಂಕ್ರಿಟನ್ನು ಸಿ.ಸಿ.ರಸ್ತೆಗೆ ಕಡಿಮೆ ಪ್ರಮಾಣದಲ್ಲಿ ಹಾಕಲಾಗಿದ್ದು, ಹಾಗಾಗಿ ರೂ. 10,318/-ಗಳ ಹಣ ದುರುಪಯೋಗವಾಗಿದೆಯೆಂದು, ಇಬ್ಬರು ಆಪಾದಿತರು ಸಮಾನವಾಗಿ ರೂ. 5,159/- ಗಳಿಗೆ ಜವಾಬ್ದಾರರಾಗುತ್ತಾರೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-1ರವರು ಶ್ರೀ ಹನುಮಂತರೆಡ್ಡಿ, ಇವರು ಸಲ್ಲಿಸಿರುವ ಆಕ್ಷೇಪಣೆ ಮತ್ತು ದಾಖಲೆಗಳನ್ನು ಪರಿಶೀಲಿಸಿದ್ದು, ಪ್ರಶ್ನಿತ ಕಾಮಗಾರಿಯ ಮಂಜೂರಾದ ಅಂದಾಜು ಪಟ್ಟಿಯಲ್ಲಿರುವ ಅಳತೆಗೂ ಸ್ಥಳಪರಿಶೀಲನೆಯಲ್ಲಿ ಕಂಡುಬಂದ ಅಳತೆಗೂ ವ್ಯತ್ಯಾಸ ಕಂಡುಬಂದಿದೆಯೆಂದು, ಇಬ್ಬರು ಆಪಾದಿತರು ಸಮಾನವಾಗಿ ರೂ. 5,159/- ಗಳಿಗೆ ಜವಾಬ್ದಾರರಾಗುತ್ತಾರೆಂದು ಹಾಗೂ ಅವರುಗಳ ವಿರುದ್ಧದ ನಡವಳಿಕೆಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಅಂಶಗಳು ಕಂಡುಬರುವುದಿಲ್ಲವೆಂದು, ಇವರುಗಳು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತ-1ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಪ್ರಕರಣದಲ್ಲಿ ಭಾಗಿಯಾಗಿರುವ ಇಬ್ಬರು ಆಪಾದಿತರು ಚಿತ್ತಾಪೂರ ತಾಲ್ಲೂಕಿನ ಸುಗೂರ್ ಗ್ರಾಮದಿಂದ ವೆಂಕಟೇಶ್ವರ ದೇವಸ್ಥಾನದ ವರೆಗೆ ಸಿ.ಸಿ. ರಸ್ತೆ ನಿರ್ಮಾಣ ಕಾಮಗಾರಿಯನ್ನು ಮಂಜೂರಾದ ಅಂದಾಜು ಪಟ್ಟಿಯಂತೆ ನಿರ್ವಹಿಸದೇ ಹಣ ದುರುಪಯೋಗಪಡಿಸಿಕೊಂಡಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಸದರಿಯವರುಗಳು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಅವರುಗಳ ವಿರುದ್ಧದ

ಆರೋಪಗಳ ಬಗ್ಗೆ ಶಿಸ್ತು ಕ್ರಮ ಕೈಗೊಳ್ಳುವುದು ಅವಶ್ಯವೆಂದು ಕಂಡುಬರುತ್ತದೆ. ಆದ್ದರಿಂದ ಸದರಿ ಇಬ್ಬರು ಆಪಾದಿತರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1ರವರಿಗೆ ವಹಿಸಲು ಸರ್ಕಾರವು ತೀಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ : ಗ್ರಾಅಪ 57 ಇಎನ್‌ಕ್ಯೂ 2017 ಬೆಂಗಳೂರು, ದಿನಾಂಕ. 09.06.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಅಧಿಕಾರಿ / ನೌಕರರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ:-

1. ಶ್ರೀ ಹನುಮಂತರೆಡ್ಡಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕಾಳಗಿ, ಚಿತ್ತಾಪೂರ ತಾಲ್ಲೂಕು (ಹಾಲಿ ಲೋಕೋಪಯೋಗಿ ಉಪ ವಿಭಾಗ, ಚಿತ್ತಾಪೂರ)

2. ಶ್ರೀ ಸುಧೀರ್ ಕುಮಾರ್, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕಾಳಗಿ, ಚಿತ್ತಾಪೂರ ತಾಲ್ಲೂಕು (ಹಾಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಕಲಬುರಗಿ)

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

09/06/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ.
7. ಉಪ ನಿಬಂಧಕರು ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸಂಬಂಧಪಟ್ಟ ಆಪಾದಿತ ಅಧಿಕಾರಿ / ನೌಕರರಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ಇವರ ಮುಖಾಂತರ.

9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಬಿ&ಸಿ).
11. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮ ಪಂಚಾಯತ್ ಶಾಖೆ, ಗ್ರಾ.ಅ.ಪಂ.ರಾಜ್ ಇಲಾಖೆ.
12. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
13. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.